ದಿನಾಂಕ 28.10.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ವಾದಿ ಪರ ಶ್ರೀ ಎ.ಎನ್.ಟಿ ವಕೀಲರಿಂದ**

ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು, ಅದರಲ್ಲಿರುವ ಸಂಗತಿಗಳೆಲ್ಲಾ ಸತ್ಯವಿದ್ದು, ಅದನ್ನು ನಾನೇ ಹೇಳಿ ಬರೆಸಿದ್ದೇನೆ ಹಾಗೂ ಪ್ರಮಾಣ ಪತ್ರಕ್ಕೆ ನಾನೇ ಸಹಿ ಮಾಡಿರುತ್ತೇನೆ.

ನಿಪಿ-01 ಕ್ರಯ ಪತ್ರಕ್ಕೆ ನಾನು ಸಾಕ್ಷಿದಾರನಾಗಿ ಸಹಿ ಮಾಡಿರುತ್ತೇನೆ. ಸಾಕ್ಷಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-01(ಎ) ಎಂದು ಗುರುತಿಸಲಾಯಿತು. ನನ್ನ ಜೊತೆಯಲ್ಲಿ ಸಾಕ್ಷಿದಾರರಾಗಿ ರಂಗಸ್ವಾಮಿ. ಬಿ ರವರು ಸಹಿ ಮಾಡಿರುತ್ತಾರೆ. ಪತ್ರವನ್ನು ಗೋವಿಂದಪ್ಪನವರು ಬರೆದಿರುತ್ತಾರೆ.

**ಪಾಟೀ ಸವಾಲಿಗೆ ಸಮಯ ಕೋರಿರುತ್ತಾರೆ.**
**ಪ್ರತಿವಾದಿಗಳು ಪ್ರತಿವಾದ ಪತ್ರ ಸಲ್ಲಿಸಿರುವುದಿಲ್ಲ ಹಾಗಾಗಿ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.

(ರಾಘವೇಂದ್ರ. ಡಿ. )
ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ ದಂಡಾಧಿಕಾರಿಗಳು, ಭದ್ರಾವತಿ.